ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಕ್ರೈಸ್ ಅಧೀನದ ವಸತಿ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ ಕುರಿತು

ಶ್ರೀ ನಿರಾಣಿ ಹಣಮಂತ ರುದ್ರಪ್ಪ(ಪದವೀಧರರ ಕ್ಷೇತ್ರ) -

1069 (1241) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ಸಂಸ್ಥೆಯ ಅಧೀನದ ವಸತಿ ಶಾಲೆಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳೆಷ್ಟು;

(ಆ) ಸದರಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳಲ್ಲಿ ವಸತಿ ಶಾಲಾ ಶಿಕ್ಷಕರುಗಳಿಗೆ ಯಾವ ನಿಯಮದಡಿಯಲ್ಲಿ ಪ್ರಭಾರದಲ್ಲಿರಿಸಲಾಗುವುದು; (ಮಾಹಿತಿ ಒದಗಿಸುವುದು)

(ಇ) ಪ್ರಭಾರದಲ್ಲಿರಿಸಿದ ಸಿಬ್ಬಂದಿಗಳಿಗೆ ಇದುವರೆಗೆ ಮಂಜೂರಾದ ಪ್ರಭಾರ ಭತ್ಯೆ ಎಷ್ಟು; (ವಿವರ ನೀಡುವುದು)

(ಈ) ಇಲ್ಲವಾದಲ್ಲಿ ಪ್ರಭಾರ ಭತ್ಯೆಯನ್ನು ನೀಡದಿರಲು ಕಾರಣಗಳೇನು; ಸದರಿ ವಸತಿ ಶಾಲೆಗಳಿಗೆ ಪೂರ್ಣ ಕಾಲಿಕ ಪ್ರಾಂಶುಪಾಲರ ಅವಶ್ಯಕತೆಯಿಲ್ಲವೇ; ಅವಶ್ಯಕತೆಯಿದ್ದಲ್ಲಿ ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು?